ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1477 (1767)

ಸದಸ್ಯರ ಹೆಸರು : ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)

ಉತ್ತರಿಸುವ ದಿನಾಂಕ : 23.03.2020

ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
(ಅ)	ರಾಜ್ಯದಲ್ಲಿನ ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿ ಮಂಜೂರಾಗಿರುವ ಮುಖ್ಯ ಗ್ರಂಥಾಲಯಾಧಿಕಾರಿಗಳ ಹುದ್ದೆಗಳೆಷ್ಟು;	54
(ಆ)	ಇದರಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ; ಇದರಲ್ಲಿ ನೇರ ನೇಮಕಾತಿ ಕೋಟಾ ಮತ್ತು ಬಡ್ತಿ ಕೋಟಾದ ಹುದ್ದೆಗಳೆಷ್ಟು; (ವಿವರ ನೀಡುವುದು)	ಖಾಲಿ ಹುದ್ದೆಗಳ ಸಂಖ್ಯೆ : 38 ಇದರಲ್ಲಿ:- ನೇರ ನೇಮಕಾತಿ ಕೋಟಾ ಹುದ್ದೆಗಳು – 36 ಬಡ್ತಿ ಕೋಟಾ ಹುದ್ದೆಗಳು – 02
(ಇ)	ಈ ಹುದ್ದೆಗಳು ಎಷ್ಟು ಅವಧಿಯಿಂದ ಖಾಲಿ ಇವೆ;	2008 ರಿಂದ ಖಾಲಿ ಇವೆ.
(ಈ)	ಖಾಲಿ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು; ವಿಶೇಷವಾಗಿ ಬಡ್ತಿ ಕೋಟಾದ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)	ನೇರ ನೇಮಕಾತಿಯಡಿ 05 ಹುದ್ದೆಗಳನ್ನು ಭರ್ತಿ ಮಾಡಲು ಕೆ.ಪಿ.ಎಸ್.ಸಿ ಗೆ ಪ್ರಸ್ತಾವನೆ ಸಲ್ಲಿಸಿದ್ದು, ಕರ್ನಾಟಕ ಲೋಕ ಸೇವಾ ಆಯೋಗದಿಂದ ಅಧಿಸೂಚನೆ ಹೊರಡಿಸಿ, ಅಭ್ಯರ್ಥಿಗಳ ದಾಖಲಾತಿಗಳ ಪರಿಶೀಲನೆ ಕಾರ್ಯ ಪ್ರಗತಿಯಲ್ಲಿರುತ್ತದೆ. 18 ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದಿಂದ ಈಗಾಗಲೇ ಮಂಜೂರಾತಿ ದೊರಕಿದ್ದು, ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಕಳುಹಿಸಲು ಕ್ರಮ ಜರುಗಿಸಲಾಗುತ್ತಿದೆ. ಬಡ್ತಿ ಕೋಟಾದಡಿ 02 ಹುದ್ದೆಗಳನ್ನು ಭರ್ತಿ ಮಾಡಲು ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಅರ್ಹ ಗ್ರಂಥಪಾಲಕರಿಗೆ ಮುಖ್ಯ ಗ್ರಂಥಾಲಯಾಧಿಕಾರಿ ಹುದ್ದೆಗೆ ಇಲಾಖಾ ಮುಂಬಡ್ತಿ ಸಭೆ ನಡೆಸಲಾಗಿದೆ. ಸದರಿ ಸಿಬ್ಬಂದಿಗಳ ವಿರುದ್ಧ ಇಲಾಖಾ ವಿಚಾರಣೆ ಇರುವ ಪ್ರಯುಕ್ತ ಮುಂಬಡ್ತಿ ಆದೇಶಗಳನ್ನು ಮುಚ್ಚಿದ ಲಕೋಟೆಗಳಲ್ಲಿ ಇರಿಸಲಾಗಿದೆ.
(ಉ)	ಈ ಹುದ್ದೆಗಳನ್ನು ಭರ್ತಿ ಮಾಡುವುದು ಯಾವಾಗ ? (ವಿವರ ನೀಡುವುದು)	ಕರ್ನಾಟಕ ಲೋಕಸೇವಾ ಆಯೋಗದಿಂದ ನೇರ ನೇಮಕಾತಿ ಮೂಲಕ 23 ಹುದ್ದೆಗಳಿಗೆ ಆಯ್ಕೆ ಪ್ರಕ್ರಿಯೆ ಪೂರ್ಣಗೊಳಿಸಿದ ನಂತರ ಹುದ್ದೆಗಳನ್ನು ಭರ್ತಿ ಮಾಡಲಾಗುವುದು. ಬಡ್ತಿ ನೀಡಲಾದ ಸಿಬ್ಬಂದಿಗಳ ವಿರುದ್ಧ ಇರುವ ಇಲಾಖಾ ವಿಚಾರಣೆ ಮುಕ್ತಾಯಗೊಂಡ ನಂತರ ಬಡ್ತಿ ಕೋಟಾದ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

ಸಂಖ್ಯೆ: ಇಡಿ 11 ಎಲ್‌ಐಬಿ 2020

(ಎಸ್. ಸುರೇಶ್‌ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.